ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012.

ಸಂಖ್ಯೆ: ಪಮೂಶಿಇ/ಪರೀಕ್ಷೆ/ದ್ವಿಪ್ರಾಪ/2020-21 ದಿನಾಂಕ: 25-04-2021

## ಸುತ್ತೋಲೆ

ವಿಷಯ: 2020-21ನೇ ಸಾಲಿನ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷಾ ದಿನಾಂಕವನ್ನು ಮುಂದೂಡುವ ಬಗ್ಗೆ.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ: ಶೈಶಾ/ಶೈಚವೇ/2020-2021 ದಿನಾಂಕ 18-03-2021.

2. ಈ ಕಛೇರಿ ಸುತ್ತೋಲೆ ಸಂಖ್ಯೆ: ಪಮೂಶಿಇ/ಪರೀಕ್ಷೆ/ದ್ವಿಪ್ರಾಪ/2020-21 ದಿನಾಂಕ 23-04-2021.

* * * *

ಪದವಿ ಪೂರ್ವ ಶಿಕ್ಷಣ ಇಲಾಖೆಯು 2020-21ನೇ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಯನ್ನು ದಿನಾಂಕ 28-04-2021 ರಿಂದ ದಿನಾಂಕ 18-05-2021 ರವರೆಗೆ ನಡೆಸಲು ತೀರ್ಮಾನಿಸಿ ಉಲ್ಲೇಖ-1ರ ಸುತ್ತೋಲೆಯನ್ನು ಹೊರಡಿಸಲಾಗಿತ್ತು. ಕೋವಿಡ್-19ರ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಉಲ್ಲೇಖ-2ರಲ್ಲಿ ಪ್ರಾಯೋಗಿಕ ಪರೀಕ್ಷೆಯನ್ನು ಆಯಾ ಕಾಲೇಜುಗಳ ಹಂತದಲ್ಲಿಯೇ ನಡೆಸಲು ಸೂಚಿಸಲಾಗಿತ್ತು.

ಆದರೆ ಕೋವಿಡ್-19ರ ಸಾಂಕ್ರಾಮಿಕ ರೋಗವು ಪ್ರತಿನಿತ್ಯವೂ ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಪ್ರಾಯೋಗಿಕ ಪರೀಕ್ಷೆಯನ್ನು ಮುಂದೂಡಬೇಕೆಂದು ಕೆಲವು ಪೋಷಕರು, ವಿದ್ಯಾರ್ಥಿಗಳು, ಉಪನ್ಯಾಸಕರು ಹಾಗೂ ಖಾಸಗಿ ಕಾಲೇಜುಗಳ ಆಡಳಿತ ಮಂಡಳಿಗಳಿಂದ ಮನವಿಗಳು ಸ್ವೀಕೃತವಾದವು. ಸದರಿ ಮನವಿಗಳ ಕುರಿತು ಇಲಾಖೆಯ ಹಿರಿಯ ಅಧಿಕಾರಿಗಳು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರೊಂದಿಗೆ ಸುದೀರ್ಘವಾಗಿ ಚರ್ಚಿಸಿ ಪ್ರಾಯೋಗಿಕ ಪರೀಕ್ಷೆಯನ್ನು ಮುಂದೂಡಲು ತೀರ್ಮಾನಿಸಲಾಯಿತು. ಮುಂದುವರೆದು, 2020-21ನೇ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು ಉಲ್ಲೇಖ-2ರ ಸುತ್ತೋಲೆಯಲ್ಲಿ ನೀಡಿದ ನಿರ್ದೇಶನದಂತೆ ಆಯಾ ಕಾಲೇಜುಗಳಲ್ಲೇ ತಾತ್ವಿಕ ಪರೀಕ್ಷೆಗಳು ಮುಕ್ತಾಯಗೊಂಡ ಕೂಡಲೇ ಎರಡು ದಿನಗಳ ನಂತರ ಪ್ರಾರಂಭಿಸಲು ಆದೇಶಿಸಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಗಳು:**

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ ಇವರುಗಳಿಗೆ ಮಾಹಿತಿಗಾಗಿ.
2. ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಉಪನಿರ್ದೇಶಕರ ಮೂಲಕ ಮಾಹಿತಿಗಾಗಿ.
3. ಹೆಚ್ಚುವರಿ / ಕಛೇರಿ ಪ್ರತಿ.

**ಮಾಹಿತಿಗಾಗಿ:**

1. ಆಪ್ತ ಕಾರ್ಯದರ್ಶಿಗಳು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕೊಠಡಿ ಸಂಖ್ಯೆ: 320, 3ನೇ ಮಹಡಿ ವಿಧಾನ ಸೌಧ, ಬೆಂಗಳೂರು-560001.
2. ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು, ಕೊಠಡಿ ಸಂಖ್ಯೆ: 262, 2ನೇ ಮಹಡಿ ವಿಧಾನ ಸೌಧ, ಬೆಂಗಳೂರು-560001.
3. ಆಪ್ತ ಕಾರ್ಯದರ್ಶಿಗಳು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560001.